ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ತು ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE: 10/6/20

## ರಾಜ್ಯಸಭೆ ಬಳಿಕ ಜೂ.29ಕ್ಕೆ ಮೇಲ್ಮನೆ ಚುನಾವಣೆ

# ಈಗ ಪರಿಷತ್ ಫೈಟ್!

### ಕಾಂಗ್ರೆಸ್‌ನ 5, ಜೆಡಿಎಸ್‌ನ 1, ಒಬ್ಬ ಪಕ್ಷೇತರ ಶಾಸಕರ ಅವಧಿ ಮುಕ್ತಾಯ
### ಹಾಲಿ ಅಂಕಿ ಆಟದಲ್ಲಿ ಬಿಜೆಪಿಗೆ 4, ಕಾಂಗ್ರೆಸ್‌ಗೆ 2, ಜೆಡಿಎಸ್‌ಗೆ 1 ಸ್ಥಾನ ನಿಕ್ಕಿ
### ಜೂ.11ರಿಂದ ನಾಮಪತ್ರ ಸಲ್ಲಿಕೆ | ಜೂ.29ಕ್ಕೆ ಮತದಾನ, ಅಂದೇ ರಿಸಲ್ಟ್

• ಕನ್ನಡಪ್ರಭ ವಾರ್ತೆ ಬೆಂಗಳೂರು

ರಾಜ್ಯಸಭೆ ಚುನಾವಣೆ ಬೆನ್ನಲ್ಲೇ ವಿಧಾನ ಪರಿಷತ್ ಚುನಾವಣೆಯ ದಿನಾಂಕವನ್ನು ಚುನಾವಣಾ ಆಯೋಗವು ಘೋಷಣೆ ಮಾಡಿದ್ದು, ವಿಧಾನಸಭೆಯಿಂದ ವಿಧಾನಪರಿಷತ್‌ಗೆ ತೆರವಾಗುವ ಏಳು ಸ್ಥಾನಗಳಿಗೆ ಜೂ.29ಕ್ಕೆ ಚುನಾವಣೆ ನಿಗದಿಪಡಿಸಿದೆ.

ಕಾಂಗ್ರೆಸ್‌ನ ನಸೀರ್ ಅಹಮದ್, ಜಯಮ್ಮ, ಎಂ.ಸಿ. ವೇಣುಗೋಪಾಲ್, ಎಚ್.ಎಂ. ರೇವಣ್ಣ, ಎನ್.ಎಸ್.ಬೋಸರಾಜು, ಜೆಡಿಎಸ್‌ನ ಟಿ. ಎ. ಶರವಣ ಹಾಗೂ ಪಕ್ಷೇತರ ಶಾಸಕ ಡಿ.ಯು.ಮಲ್ಲಿಕಾರ್ಜುನ್ ಅವರ ಸದಸ್ಯತ್ವದ ಅವಧಿಯು ಜೂ.30ಕ್ಕೆ ಮುಕ್ತಾಯವಾಗಲಿದೆ. ಈ ಹಿನ್ನೆಲೆಯಲ್ಲಿ ಆ ಸ್ಥಾನಗಳ ಭರ್ತಿಗೆ ಚುನಾವಣೆ ನಡೆಯಲಿದೆ. ಜೂ.11ರಂದು ಅಧಿಸೂಚನೆ ಪ್ರಕಟವಾಗಲಿದ್ದು, ಅಂದಿನಿಂದಲೇ ನಾಮಪತ್ರ ಸಲ್ಲಿಸಬಹುದಾಗಿದೆ. ಜೂ.18ರಂದು ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿದೆ. ಜೂ.19ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಜೂ.22ರಂದು ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದೆ.

ಚುನಾವಣೆಯು ಜೂ.29ರಂದು ಬೆಳಗ್ಗೆ 9ರಿಂದ ಸಂಜೆ 4 ಗಂಟೆವರೆಗೆ ನಡೆಯಲಿದೆ. ವಿಧಾನಸಭಾ ಸದಸ್ಯರು ಮತ ಚಲಾಯಿಸಲಿದ್ದಾರೆ. ಮತ ಎಣಿಕೆ ಕಾರ್ಯವು ಜೂ.29ರ ಸಂಜೆ 5 ಗಂಟೆಗೆ ಪ್ರಾರಂಭವಾಗಲಿದ್ದು, ಬಹುತೇಕ ಅಂದೇ ಫಲಿತಾಂಶ ಪ್ರಕಟಿಸಲಾಗಲಿದೆ. ಚುನಾವಣೆ ನಡೆಸುವ ಸಂಬಂಧ ಎಲ್ಲಾ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಆಯೋಗವು ರಾಜ್ಯ ಸರ್ಕಾರಕ್ಕೆ ಸೂಚನೆ ನೀಡಿದೆ.

